# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **223**

ಮಾನ್ಯ ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ: : 09-12-2020

ಉತ್ತರಿಸುವ ಮಾನ್ಯ ಸಚಿವರು : ಮಾನ್ಯ ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿಯಲ್ಲಿ ಕಾಲಕಾಲಕ್ಕೆ ಮಣ್ಣು ನೀರು ಪರೀಕ್ಷಿಸಲು ಮತ್ತು ಇತರೆ ತಾಂತ್ರಿಕ ನೆರವಿಗಾಗಿ "ಸಂಚಾರಿ ಕೃಷಿ ಹೆಲ್ತ್ ಕ್ಲಿನಿಕ್" ಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ; | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೃಷಿ ಬೆಳೆಗಳಲ್ಲಿನ ಕೀಟ, ರೋಗ, ಕಳೆ, ಸಸ್ಯ ಪೋಷಕಾಂಶಗಳ ಕೊರತೆ, ಮಣ್ಣಿನ ಫಲವತ್ತತೆ ಕುರಿತು ತಾಂತ್ರಿಕ ಸಹಾಯವನ್ನು ಕ್ಷೇತ್ರ ಮಟ್ಟದಲ್ಲಿಯೇ ರೈತರಿಗೆ ಒದಗಿಸುವ ನಿಟ್ಟಿನಲ್ಲಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ಸ್ಥಾಪನೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಈ ತರಹದ ಕ್ಲಿನಿಕ್‌ಗಳ ಉದ್ದೇಶಕ್ಕಾಗಿ ಎಷ್ಟು ಹಣವನ್ನು ಮೀಸಲಿಡಲಾಗಿದೆ; | 2019-20 ನೇ ಸಾಲಿನಲ್ಲಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಸ್ಥಾಪನೆಗಾಗಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೂ. 8.00 ಕೋಟಿಗಳ ಅನುದಾನವನ್ನು ಒದಗಿಸಲಾಗಿತ್ತು. ಆದರೆ ಕೋವಿಡ್-19 ರ ಕಾರಣದಿಂದ ಅನುಷ್ಠಾನ ಮಾಡಲು ಸಾಧ್ಯವಾಗದ ಕಾರಣ 2020-21 ನೇ ಸಾಲಿನಲ್ಲಿ ಮರುಮೌಲ್ಯೀಕರಣಗೊಳಿಸಿ ಅನುದಾನವನ್ನು ಒದಗಿಸಲಾಗಿರುತ್ತದೆ. |
| ಇ) | ಪ್ರಸಕ್ತ ಸಾಲಿನಲ್ಲಿ ಎಷ್ಟು ವಾಹನಗಳನ್ನು ಸದರಿ ಉದ್ದೇಶಕ್ಕಾಗಿ ಖರೀದಿಸಲಾಗಿದೆ; | 2019-20ನೇ ಸಾಲಿನಲ್ಲಿ 40 ವಾಹನಗಳನ್ನು ಖರೀದಿಸಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ವಾಹನಗಳಲ್ಲಿ ಅವಶ್ಯವಿರುವ ವಿನ್ಯಾಸಗಳನ್ನು ಅಳವಡಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಈ) | ಈ ಯೋಜನೆಯಡಿಯಲ್ಲಿ ಎಷ್ಟು ಹಳ್ಳಿಗಳಿಗೆ ಭೇಟಿ ನೀಡಿ ರೈತರಿಗೆ ಸಹಾಯ ಮಾಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು) | ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಸ್ಥಾಪನೆ ಕಾರ್ಯಕ್ಕೆ ಅನುವಾಗುವಂತೆ ವಾಹನಗಳಲ್ಲಿ ಅಳವಡಿಸಬೇಕಾದ ವಿನ್ಯಾಸ ಕಾರ್ಯ ಹಾಗೂ ಅಗತ್ಯವಿರುವ ಉಪಕರಣಗಳ ಅಳವಡಿಕೆ ಕಾರ್ಯ ಪ್ರಗತಿಯಲ್ಲಿದ್ದು, ಈ ಪ್ರಕ್ರಿಯೆಯು ಮುಕ್ತಾಯವಾದ ಕೂಡಲೇ ಕ್ಷೇತ್ರ ಭೇಟಿ ನೀಡಿ ರೈತರಿಗೆ ಯೋಜನೆಯ ಸೌಲಭ್ಯ ಒದಗಿಸಲಾಗುವುದು. |

**ಸಂಖ್ಯೆ:- ಕೃಇ/148/ಕೃಕೈಉ/2020**

(ಬಿ.ಸಿ.ಪಾಟೀಲ್)

**ಕೃಷಿ ಸಚಿವರು**